ಡಿವೈಎಸ್‌ಪಿ ಯಾರಿದ್ದಾರೆ, ಅವರಿಗೆ ಮತ್ತೊಮ್ಮೆ ಸ್ಥಳ ಪರಿಶೀಲನೆ ಮಾಡಿ, ಸಾಧ್ಯವಾದರೆ ಕೊಡುವುದಕ್ಕೆ ಹೇಳುತ್ತೇನೆ.

ಅಧ್ಯಕ್ಷರು: ಈಗ ಪ್ರಮೋದ್ ಮಧ್ವರಾಜ್ ಅವರ ಪರವಾಗಿ ಪ್ರಸನ್ನಕುಮಾರ್ ಕೇಳಿ.

vii) ವಿಷಯ: ಉಡುಪಿ ಜಿಲ್ಲೆಯ ಕಾರ್ಮಿಕ ರಾಜ್ಯ ವಿಮಾ ಚಿಕಿತ್ಸಾಲಯಗಳಲ್ಲಿ ವಿಮೆದಾರರ ವೈದ್ಯಕೀಯ ಪಾವತಿ ಬಾಕಿ ಇರುವ ಬಗ್ಗೆ.

ಶ್ರೀ ಕೆ. ಬಿ. ಪ್ರಸನ್ನಕುಮಾರ್ (ಶಿವಮೊಗ್ಗ) (ಪ್ರಮೋದ್ ಮಧ್ವರಾಜ್ ಪರವಾಗಿ): ಮಾನ್ಯ ಅಧ್ಯಕ್ಷರೆ, ಉಡುಪಿ ಜಿಲ್ಲೆಯ ಕಾರ್ಮಿಕ ರಾಜ್ಯ ವಿಮಾ ಚಿಕಿತ್ಸಾಲಯಗಳಲ್ಲಿ ವಿಮೆದಾರರ ವೈದ್ಯಕೀಯ ವೆಚ್ಚ ಪಾವತಿ ಬಾಕಿ ಇರುವ ಬಗ್ಗೆ ಮಾನ್ಯ ಕಾರ್ಮಿಕ ಸಚಿವರ ಗಮನವನ್ನು ಸೆಳೆಯುತ್ತೇನೆ.

ಶ್ರೀ ಪಿ. ಟಿ. ಪರಮೇಶ್ವರ ನಾಯಕ್ (ಕಾರ್ಮಿಕ ಸಚಿವರು): ಮಾನ್ಯ ಅಧ್ಯಕ್ಷರೆ, ತಮ್ಮ ಅಪ್ಪಣೆಯನ್ನು ಪಡೆದು ಈ ಹೇಳಿಕೆಯನ್ನು ನೀಡಬಯಸುತ್ತೇನೆ.

(ಹೇಳಿಕೆಯನ್ನು ಲಗತ್ತಿಸಲಾಗಿದೆ)

ಶ್ರೀ ಪಿ. ಟಿ. ಪರಮೇಶ್ವರ ನಾಯಕ್: ಮಾನ್ಯ ಅಧ್ಯಕ್ಷರೆ, ಕರ್ನಾಟಕ ರಾಜ್ಯ ವಿಮಾ ನಿಗಮವು, ಕಾರ್ಮಿಕ ರಾಜ್ಯ ವಿಮಾ ನಿಗಮದ ಮಾದರಿ ಆಸ್ಪತ್ರೆ, ರಾಜಾಜಿನಗರದಲ್ಲಿ ಸಿಬ್ಬಂದಿಗಳ ಕೊರತೆಯಿಂದಾಗಿ ಮರುಪಾವತಿ ಮಾಡುವುದಕ್ಕೆ ವಿಳಂಬವಾಗಿದೆ. ಈಗಾಗಲೇ ಅಧಿಕಾರಿಗಳನ್ನು ನಿಯೋಜನೆ ಮಾಡಿದ್ದೇವೆ. ತ್ವರಿತವಾಗಿ ಮರುಪಾವತಿಯನ್ನು ಮಾಡಿಕೊಡುತ್ತೇವೆ.

ಶ್ರೀ ಪಿ. ಟಿ. ಪರಮೇಶ್ವರ ನಾಯ್ಕ (ಕಾರ್ಮಿಕ ಸಚಿವರು): ಮಾನ್ಯ ಅಧ್ಯಕ್ಷರೆ, ಉಡುಪಿ ಜಿಲ್ಲೆಯಲ್ಲಿ ಉಡುಪಿ, ಮಣಿಪಾಲ್, ಕುಂದಾಪುರ ಮತ್ತು ಕಾರ್ಕಳ ಇಲ್ಲಿ ಒಟ್ಟಾರೆ 04 ಕಾರ್ಮಿಕರ ರಾಜ್ಯ ವಿಮಾ ಚಿಕಿತ್ಸಾಲಯಗಳು ಕಾರ್ಯ ನಿರ್ವಹಿಸುತ್ತಿವೆ. ಈ ಚಿಕಿತ್ಸಾಲಯಗಳಿಗೆ ಸಂಬಂಧಿಸಿದಂತೆ 2011–12ನೇ ಸಾಲಿನಲ್ಲಿ ₹8,52,313–00 ಮೌಲ್ಯದ ವೈದ್ಯಕೀಯ ವೆಚ್ಚದ ಮರು

ಪಾವತಿ ಬಿಲ್ಲುಗಳನ್ನು 2012–13ನೇ ಸಲಿನಲ್ಲಿ ₹ 63,53,564/– ಮೌಲ್ಯದ ವೈದ್ಯಕೀಯ ವೆಚ್ಚದ ಮರುಪಾವತಿ ಬಿಲ್ಲುಗಳನ್ನು ತಿರುವಳಿ ಮಾಡಲಾಗಿರುತ್ತದೆ. 2013–14ನೇ ಸಾಲಿನಲ್ಲಿ ಒಟ್ಟಾರೆ ₹69,12,544–00 ಮೌಲ್ಯದ ವೈದ್ಯಕೀಯ ವೆಚ್ಚದ ಮರುಪಾವತಿ ಬಿಲ್ಲುಗಳಿಗೆ ಮಂಜೂರಾತಿ ನೀಡಲಾಗಿರುತ್ತದೆ.

ಮುಂದುವರೆದು, ವಿಮಾದಾರರ ವೈದ್ಯಕೀಯ ವೆಚ್ಚ ಮರುಪಾವತಿ ಬಿಲ್ಲುಗಳು ಕಳೆದ 06 ತಿಂಗಳಿಂದ ತಿರುವಳಿಗಾಗಿ ಬಾಕಿ ಇರುವ ವಿಷಯ ಇಲಾಖೆಯ ಗಮನಕ್ಕೆ ಬಂದಿರುತ್ತದೆ. ಪ್ರಮುಖವಾಗಿ ಈ ಜಿಲ್ಲೆಯಲ್ಲಿನ ಕಾರ್ಮಿಕರ ರಾಜ್ಯ ವಿಮಾ ಚಿಕಿತ್ಸಾಲಯಗಳಲ್ಲಿ ಲಿಪಿಕ ಮತ್ತು ಫಾರ್ಮಸಿಸ್ಟ್ ವೃಂದದ ಹುದ್ದೆಗಳು ಖಾಲಿ ಇರುವುದರಿಂದ ವಿಮಾದಾರರ ವೈದ್ಯಕೀಯ ವೆಚ್ಚದ ಮರುಪಾವತಿ ಬಿಲ್ಲುಗಳನ್ನು ತಿರುವಳಿ ಮಾಡಲು ವಿಳಂಬವಾಗಿರುತ್ತದೆ. ಇವುಗಳನ್ನು ವಿಲೇವಾರಿ ಮಾಡಲು ಅಗತ್ಯವಿರುವ ಸಿಬ್ಬಂದಿಗಳನ್ನು ಶೀಘ್ರವಾಗಿ ನಿಯೋಜಿಸಿ ಬಾಕಿ ಇರುವ ಎಲ್ಲಾ ವೈದ್ಯಕೀಯ ವೆಚ್ಚ ಮರುಪಾವತಿ ಬಿಲ್ಲುಗಳನ್ನು ತಿರುವಳಿ ಮಾಡಲಾಗುವುದು.

viii) ವಿಷಯ: ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ನೀರು ಪೂರೈಕೆ ಯೋಜನೆಗಳಿಗಾಗಿ ಕೇಂದ್ರದಿಂದ ಬಿಡುಗಡೆಯಾದ ಅನುದಾನದಲ್ಲಿ ಭಾಗಶಃ ಅನುದಾನವನ್ನು ಉತ್ತರ ಕನ್ನಡ ಜಿಲ್ಲೆಯಿಂದ ಬೇರೆ ಜಿಲ್ಲೆಗೆ ವರ್ಗಾಯಿಸಿರುವ ಬಗ್ಗೆ.

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಶಿರಸಿ): ಮಾನ್ಯ ಅಧ್ಯಕ್ಷರೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಯಿಂದ ನೀರು ಪೂರೈಕೆ ಯೋಜನೆಗಳಿಗಾಗಿ ಕೇಂದ್ರದಿಂದ ಬಿಡುಗಡೆಯಾದ ಅನುದಾನದಲ್ಲಿ ಭಾಗಶಃ ಅನುದಾನವನ್ನು ಉತ್ತರ ಕನ್ನಡ ಜಿಲ್ಲೆಯಿಂದ ಬೇರೆ ಜಿಲ್ಲೆಗೆ ವರ್ಗಾಯಿಸಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನವನ್ನು ಸೆಳೆಯುತ್ತೇನೆ.

ಶ್ರೀ ಟಿ. ಬಿ. ಜಯಚಂದ್ರ, ಕಾನೂನು ಮತ್ತು ಸಂಸದೀಯ ವ್ಯವಹಾರ ಸಚಿವರು (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಪರವಾಗಿ):